ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಹಿಂದುಳಿದ ವರ್ಗಗಳಿಗೆ ವಿಶೇಷ ಅನುದಾನ ನೀಡುವ ಬಗ್ಗೆ

ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು):-

807 (854) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಹಿಂದುಳಿದ ವರ್ಗದವರ ಒಟ್ಟು ಜನ ಸಂಖ್ಯೆ ಎಷ್ಟು; ಇದೇ ರೀತಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಜನ ಸಂಖ್ಯೆ ಎಷ್ಟು ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಸರ್ಕಾರ ವಿಶೇಷ ಅನುದಾನ ನೀಡುವ ರೀತ್ಯಾ ಹಿಂದುಳಿದ ವರ್ಗದವರಿಗೆ ವಿಶೇಷ ಅನುದಾನ ನೀಡದಿರಲು ಕಾರಣವೇನು; ವಿಶೇಷ ಅನುದಾನ ನೀಡಲು ಕ್ರಮ ಜರುಗಿಸಲಾಗುವುದೇ ?